ಕರ್ನಾಟಕ ಸರ್ಕಾರ
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ
ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

**ಸಂಖ್ಯೆ : ವಾಇ : ಜಂ ನಿ : ಸುಮಪ : 2020–21** **ದಿನಾಂಕ : 10–12–2020**

## ಮಾಧ್ಯಮ ಆಮಂತ್ರಣ

**ಪತ್ರಿಕಾಗೋಷ್ಠಿ :**

**ಆರ್. ಅಶೋಕ್, ಕಂದಾಯ ಸಚಿವರು,**

**ದಿನಾಂಕ : 11–12–2020 ಶುಕ್ರವಾರ ಅಪರಾಹ್ನ 12–00 ಗಂಟೆಗೆ**

**ಸ್ಥಳ : ಕೊಠಡಿ ಸಂಖ್ಯೆ 334, ಸಮ್ಮೇಳನ ಸಭಾಂಗಣ ಮೂರನೇ ಮಹಡಿ, ವಿಧಾನ ಸೌಧ, ಬೆಂಗಳೂರು**

## ಪತ್ರಿಕಾ ಪ್ರಕಟಣೆ

### ಕರ್ನಾಟಕ ಧನವಿನಿಯೋಗ (ಸಂಖ್ಯೆ 4) ವಿಧೇಯಕ ಅಂಗೀಕಾರ : ಬಸವರಾಜ ಬೊಮ್ಮಾಯಿ

ಬೆಂಗಳೂರು, ಡಿಸೆಂಬರ್ 10 (ಕರ್ನಾಟಕ ವಾರ್ತೆ): 2020ನೇ ಸಾಲಿನ “ಕರ್ನಾಟಕ ಧನ ಧನವಿನಿಯೋಗ (ಸಂಖ್ಯೆ 4) ವಿಧೇಯಕವನ್ನು ಅಂಗೀಕರಿಸುವಂತೆ ಮುಖ್ಯಮಂತ್ರಿಗಳ ಪರವಾಗಿ ಗೃಹ ಸಚಿವ ಬಸವರಾಜ ಬೊಮ್ಮಾಯಿ ಇಂದು ವಿಧಾನಪರಿಷತ್‌ನಲ್ಲಿ ಪ್ರಸ್ತಾವನೆ ಮಂಡಿಸಿದರು.

ಪ್ರಸ್ತಾವನೆ ಮಂಡಿಸಿದ ನಂತರ ವಿವರಣೆ ನೀಡಿದ ಸಚಿವರು, ವಾರ್ಷಿಕವಾಗಿ ಬಜೆಟ್ ಮಂಡಿಸಿದ ಮೇಲೆ ಕೆಲವು ವಿಶೇಷ ಸೇವೆಗಳ ವೆಚ್ಚ ಬರುವ ಸಂದರ್ಭದಲ್ಲಿ ವೆಚ್ಚ ಮಾಡಲು ಪ್ರಸಕ್ತ ಸಾಲಿನ ಎರಡನೇ ಕಂತಿನಲ್ಲಿ 3320.40 ಕೋಟಿ ರೂಗಳ ಅನುದಾನ ಬಿಡುಗಡೆ ಮಾಡುವಂತೆ ಪ್ರಸ್ತಾಪ ಸಲ್ಲಿಸಿದರು.

ಈ ಅನುದಾನವನ್ನು ಕೋವಿಡ್ 19ರ ಮಾರಕ ರೋಗ ನಿಯಂತ್ರಣಕ್ಕೆ ಹಾಗೂ ನೈಸರ್ಗಿಕ ವಿಕೋಪಗಳಿಗೆ ಬಳಕೆ ಮಾಡಲಾಗುವುದು. ಉಳಿದಂತೆ ರೂ.2210 ಕೋಟಿ ಗಳನ್ನು ಅಭಿವೃದ್ಧಿಗೆ ಪೂರಕವಾದ ಯೋಜನೆಗಳಿಗೆ ವಿನಿಯೋಗಿಸಲಾಗುವುದು ಎಂದರು.

ನಂತರ ಎಲ್ಲರ ಅನುಮತಿಯೊಂದಿಗೆ 2020ನೇ ಸಾಲಿನ "ಕರ್ನಾಟಕ ಧನ ಧನವಿನಿಯೋಗ (ಸಂಖ್ಯೆ 4) ವಿಧೇಯಕವನ್ನು ಅಂಗೀಕರಿಸಿ, ವಿಧೇಯಕಕ್ಕೆ ಅನುಮೋದನೆ ನೀಡಲಾಯಿತು.

ಇದೇ ಸಂದರ್ಭದಲ್ಲಿ ವಿರೋಧ ಪಕ್ಷದ ನಾಯಕರು ಪರಿಶಿಷ್ಟ ಜಾತಿ-ಪರಿಶಿಷ್ಟ ಪಂಗಡ ಹಾಗೂ ಅಲ್ಪಸಂಖ್ಯಾತರಿಗೆ ನೀಡುವ ಕೆಲವು ಯೋಜನೆಗಳನ್ನು ಕಡಿತಗೊಳಿಸಲಾಗಿದೆ ಎಂಬ ಚರ್ಚೆಗೆ ಬಸವರಾಜ ಬೊಮ್ಮಾಯಿ ಅವರು ಕೋವಿಡ್ 19 ಹಾಗೂ ನೈಸರ್ಗಿಕ ವಿಕೋಪಗಳಿಂದ ಸರ್ಕಾರ ನಷ್ಟ ಅನುಭವಿಸಿದ್ದರೂ ಸಹ ಸಾಮಾಜಿಕ ಭದ್ರತಾ ಯೋಜನೆಯಡಿ ಅಕ್ಟೋಬರ್ ಮಾಹೆಯವರೆಗೆ 67.5 ಲಕ್ಷ ಜನರಿಗೆ ಮಾಸಾಶನ ಮಂಜೂರು ಮಾಡಲಾಗಿದೆ. ಸುಮಾರು 2.50 ಲಕ್ಷ ಜನರಿಗೆ ಆಧಾರ್ ಜೋಡಣೆ ಸಮಸ್ಯೆಯಿಂದ ಮಾಸಾಶನ ಮಂಜೂರಾಗಿಲ್ಲ. ಇದನ್ನು ಸರಿಪಡಿಸಿದ ತಕ್ಷಣ ಮಾಸಾಶನ ಮಂಜೂರು ಮಾಡುವಂತೆ ಮುಖ್ಯಮಂತ್ರಿಗಳು ತಿಳಿಸಿದ್ದಾರೆ ಎಂದರು.

ಬೇರೆ ರಾಜ್ಯದವರು ಸರ್ಕಾರಿ ನೌಕರರ ವೇತನವನ್ನು ಕಡಿತಗೊಳಿಸಿದ್ದಾರೆ. ಆದರೆ ನಮ್ಮ ಸರ್ಕಾರ ನೌಕರರ ವೇತನವನ್ನು ಕಡಿತಗೊಳಿಸಿಲ್ಲ ಇನ್ನು ಮುಂದೆಯೂ ಸಹ ಕಡಿತಗೊಳಿಸುವುದಿಲ್ಲ. ಇತ್ತೀಚಿನ ದಿನಗಳಲ್ಲಿ ವಾಣಿಜ್ಯ ತೆರಿಗೆಯಲ್ಲಿ ಸುಧಾರಣೆ ಕಂಡು ಬಂದಿದ್ದು, ಮುಂದಿನ ದಿನಗಳಲ್ಲಿ ಆರ್ಥಿಕ ಚೇತರಿಕೆ ಕಂಡು ಬಂದರೂ ಸಹ ಯಾವ ಯೋಜನೆಗಳನ್ನು ಕಡಿತಗೊಳಿಸುವುದಿಲ್ಲ. ಮುಂದಿನ ಶೈಕ್ಷಣಿಕ ವರ್ಷಕ್ಕೆ ವಿದ್ಯಾರ್ಥಿಗಳಿಗೆ ಸಿಗುವ ಎಲ್ಲ ಸೌಲಭ್ಯಗಳನ್ನು ದೊರಕಿಸಿಕೊಡಲಾಗುವುದು ಎಂದು ಸದನದಲ್ಲಿ ತಿಳಿಸಿದರು.

## ಕರ್ನಾಟಕ ಸಂಸದೀಯ ಕಾರ್ಯದರ್ಶಿಗಳ ವೇತನ, ಭತ್ಯೆಗಳು ಮತ್ತು ಸಂಕೀರ್ಣ ಉಪಬಂಧಗಳ ವಿಧೇಯಕಕ್ಕೆ ಅನುಮೋದನೆ

ಬೆಂಗಳೂರು, ಡಿಸೆಂಬರ್ 10 (ಕರ್ನಾಟಕ ವಾರ್ತೆ): ಕರ್ನಾಟಕ ಸಂಸದೀಯ ಕಾರ್ಯದರ್ಶಿಗಳ ವೇತನ, ಭತ್ಯೆಗಳು ಮತ್ತು ಸಂಕೀರ್ಣ ಉಪಬಂಧಗಳ (ನಿರಸನಗೊಳಿಸುವ) ವಿಧೇಯಕಕ್ಕೆ ಅನುಮೋದನೆ ನೀಡುವಂತೆ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಸಣ್ಣ ನೀರಾವರಿ ಸಚಿವ ಜೆ.ಸಿ. ಮಾಧುಸ್ವಾಮಿ ಪ್ರಸ್ತಾವನೆಯನ್ನು ಮಂಡಿಸಿದರು.

ಎಲ್ಲಾ ಸದಸ್ಯರ ಅನುಮತಿಯೊಂದಿಗೆ ಕರ್ನಾಟಕ ಸಂಸದೀಯ ಕಾರ್ಯದರ್ಶಿಗಳ ವೇತನ, ಭತ್ಯೆಗಳು ಮತ್ತು ಸಂಕೀರ್ಣ ಉಪಬಂಧಗಳ (ನಿರಸನಗೊಳಿಸುವ) ವಿಧೇಯಕದ ಪ್ರಸ್ತಾಪವನ್ನು ಅಂಗೀಕರಿಸಿ, ವಿಧೇಯಕಕ್ಕೆ ಸದನದಲ್ಲಿ ಅನುಮೋದನೆ ನೀಡಲಾಯಿತು.

## ಅರ್ಜಿಗಳ ಮಂಡನೆ

ಬೆಂಗಳೂರು, ಡಿಸೆಂಬರ್ 10 (ಕರ್ನಾಟಕ ವಾರ್ತೆ): ಬಳ್ಳಾರಿ ಜಿಲ್ಲೆ ಸಂಡೂರು ಹೋಬಳಿಯ ಎಮ್ಮಿಹಟ್ಟಿ ಗ್ರಾಮದ ಸರ್ವೆ ನಂಬರ್ 13/2 ರಿಂದ 43/ಸಿ ವರೆಗಿನ ಜಮೀನುಗಳನ್ನು ಸರ್ಕಾರದ ವಶಕ್ಕೆ ತೆಗೆದುಕೊಳ್ಳುವ ಬಗ್ಗೆ ಹಾಗೂ ಕುಂದಾಪುರ ತಾಲ್ಲೂಕು ಉಡುಪಿ, ರಟ್ಟಾಡಿ, ಹೊರೊಳ್ಳಿಜೆಡ್ಡು, ಮಾವಿನಕೊಡ್ಲ, ಹಣೆಜೆಡ್ಡು, ಕೆಮ್ಮಗುಡ್ಡೆ ಎಸ್.ಸಿ ಕಾಲೋನಿಯ ರಸ್ತೆ ಮತ್ತು ಸೇತುವೆಗಳನ್ನು ಕಾಂಕ್ರೀಟೀಕರಣ ಮಾಡಲು ಅರಣ್ಯ ಅಧಿಕಾರಿಗಳ ತಡೆ ಆಜ್ಞೆಯನ್ನು ತೆರುವುಗೊಳಿಸಿ ಅನುಮತಿ ನೀಡುವ ಬಗ್ಗೆ ಅರ್ಜಿಯನ್ನು ಮೋಹನ್ ಕುಮಾರ್ ಕೊಂಡಜ್ಜಿ ಅವರು ಸದನದಲ್ಲಿ ಮಂಡಿಸಿದರು.

## ವಿಧೇಯಕ ಮಂಡನೆ

ಬೆಂಗಳೂರು, ಡಿಸೆಂಬರ್ 10 (ಕರ್ನಾಟಕ ವಾರ್ತೆ):

ಕರ್ನಾಟಕ ವಿಧಾನಮಂಡಲದ ಜಂಟಿ ಪರಿಶೀಲನಾ ಸಮಿತಿಯು ಶಿಫಾರಸ್ಸು ಮಾಡಿರುವಂತೆ 2020ನೇ ಸಾಲಿನ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವಿಧೇಯಕವನ್ನು ಮುಖ್ಯಮಂತ್ರಿಗಳ ಪರವಾಗಿ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಸಣ್ಣ ನೀರಾವರಿ ಸಚಿವ ಜೆ.ಸಿ. ಮಾಧುಸ್ವಾಮಿ ವಿಧಾನ ಸಭೆಯಲ್ಲಿ ಮಂಡಿಸಿದರು.

## ಐ.ಟಿ ಕಂಪನಿಗೆ ಕಛೇರಿಯಲ್ಲಿಯೇ ಕೆಲಸ ನಿರ್ವಹಿಸಿ ಎಂದು ಒತ್ತಡ ಕೊಡಲು ಸಾಧ್ಯವಿಲ್ಲ–ಸಚಿವ ಅಶ್ವಥ್ ನಾರಾಯಣ

ಬೆಂಗಳೂರು, ಡಿಸೆಂಬರ್ 10 (ಕರ್ನಾಟಕ ವಾರ್ತೆ):

ನಮ್ಮ ರಾಜ್ಯದಲ್ಲಿ ಐ.ಟಿ. ಕ್ಷೇತ್ರವು ಪ್ರಗತಿ ಹೊಂದಿದೆ. ವರ್ಚುವಲ್ ರೂಪದಲ್ಲಿ ನಡೆದ ಬೆಂಗಳೂರು ಟೆಕ್ ಸಮ್ಮಿಟ್‌ನಲ್ಲಿ ಸುಮಾರು 3099 ಸಂಸ್ಥೆಗಳು ಕಂಪನಿಗಳು ಭಾಗವಹಿಸಿದ್ದವು. ವಿಶ್ವ ಮಟ್ಟದಲ್ಲಿ ಐ.ಟಿ ಕ್ಷೇತ್ರದಲ್ಲಿ ಪ್ರಥಮ ಸ್ಥಾನ ಪಡೆಯಲು ಸರ್ಕಾರ ಹಾಗೂ ಉದ್ಯಮಿಗಳು ಶ್ರಮ ಪಡುತ್ತಿದ್ದೇವೆ ಎಂದು ಉಪಮುಖ್ಯಮಂತ್ರಿಗಳು ಹಾಗೂ ವಿದ್ಯುನ್ಮಾನ ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವ ಡಾ. ಅಶ್ವಥ್ ನಾರಾಯಣ್ ಸಿ.ಎನ್. ಅವರು ತಿಳಿಸಿದರು.

ಇಂದು ವಿಧಾನಸಭೆಯಲ್ಲಿ ನಡೆದ ಕಾರ್ಯಕಲಾಪದಲ್ಲಿ ಇತ್ತೀಚೆಗೆ ನಡೆದ ಬೆಂಗಳೂರು ಟಕ್ ಸಮ್ಮಿಟ್‌ನಲ್ಲಿ ಎಷ್ಟು ಕಂಪನಿಗಳು ಭಾಗವಹಿಸಿದ್ದವು. ರಾಜ್ಯದಲ್ಲಿ ಬಂಡವಾಳ ಹೂಡಿಕೆಯ ಪ್ರಮಾಣ ಹಾಗೂ **work from**

**home** ಕೆಲಸವನ್ನು ಐ.ಟಿ ಕ್ಷೇತ್ರದವರು ಮಾಡುತ್ತಿರುವುದರಿಂದ ಉತ್ಪಾದನೆ ಕಡಿಮೆಯಾಗುತ್ತಿದೆ ಎಂದು ವಿಧಾನಸಭೆಯ ಸದಸ್ಯರಾದ ಶರತ್ ಕುಮಾರ್ ಬಚ್ಚೇಗೌಡ ಅವರು ಕೇಳಿದ ಪ್ರಶ್ನೆಗೆ ಸಚಿವರು ಉತ್ತರಿಸಿದರು.

ಕೋವಿಡ್ ಸಮಸ್ಯೆಯನ್ನು ಎದುರಿಸಿ ಕೆಲಸವನ್ನು ಐ.ಟಿ ಕಂಪನಿಗಳು ನಿಭಾಯಿಸಿದ್ದಾರೆ. ರಾಜ್ಯದಲ್ಲಿ ಕರೋನ ಸಮಸ್ಯೆಯಿರುವದರಿಂದ ಐ.ಟಿ ಕಂಪನಿಗೆ ಕಛೇರಿಯಲ್ಲಿಯೇ ಕೆಲಸ ನಿರ್ವಹಿಸಿ ಎಂದು ಒತ್ತಡ ಕೊಡಲು ಸಾಧ್ಯವಿಲ್ಲ. ಕಾಲಕ್ರಮೇಣ ಎಲ್ಲವೂ ಸರಿಹೋಗುತ್ತದೆ. ಎಂದು ಸಚಿವರು ತಿಳಿಸಿದರು.

ಬೆಂಗಳೂರು ಟೆಕ್ ಸಮ್ಮಿಟ್-2020 ತಾಂತ್ರಿಕ ಸಮಾವೇಶವು **"Next is Now"** ಎಂಬ ಧ್ಯೇಯೋದ್ದೇಶದೊಂದಿಗೆ ಆರಂಭವಾಗಿದ್ದು, ಮುಂಬರುವ ದಿನಗಳಲ್ಲಿ ಜಾಗತಿಕ ಮಟ್ಟದಲ್ಲಿ ತಾಂತ್ರಿಕತೆಯಲ್ಲಿ ಆವಿಷ್ಕಾರ, ನಾವೀನ್ಯತೆಯನ್ನು ರಚಿಸಲು ಅತ್ಯಾಧುನಿಕ ತಂತ್ರಜ್ಞಾನ ಹಾಗೂ ಪೂರಕ ವಾತಾವರಣ ನಿರ್ಮಿಸುವುದಕ್ಕೆ ಸಂಬಂಧಿಸಿದಂತೆ ಸಮಾವೇಶಗೊಂಡಿತ್ತು ಎಂದು ತಿಳಿಸಿದರು.

## ಕಾಡು ಪ್ರಾಣಿಗಳಿಂದ ಬೆಳೆ ಹಾನಿ ಪರಿಹಾರಕ್ಕೆ ಕಾಗೇರಿ ಸಲಹೆ

ಬೆಂಗಳೂರು, ಡಿಸೆಂಬರ್ 10 (ಕರ್ನಾಟಕ ವಾರ್ತೆ):

ವಿಶೇಷವಾಗಿ ಮಲೆನಾಡಿನಲ್ಲಿ ಆನೆ ಒಳಗೊಂಡತೆ ಇತರ ಕಾಡುಪ್ರಾಣಿಗಳ ಹಾವಳಿಯಿಂದಾಗಿ ರೈತರ ಬೆಳೆ ಹಾನಿಯಾಗುತ್ತಿದೆ. ರೈತರಿಗೆ ಕೈಗೆ ಬಂದ ಬೆಳೆಗಳನ್ನು ಕಳೆದುಕೊಳ್ಳುತ್ತಿದ್ದಾರೆ. ಕಾಡು ಪ್ರಾಣಿಗಳಿಂದ ಬೆಳೆ ಹಾನಿ ಆಗಿರುವ ಪ್ರಮಾಣದಷ್ಟು ಪರಿಹಾರ ನೀಡಬೇಕೆಂದು ವಿಧಾನಸಭೆಯ ಸಭಾಧ್ಯಕ್ಷರಾದ ವಿಶ್ವೇಶ್ವರ ಹೆಗಡೆ ಕಾಗೇರಿಯವರು ಸಲಹೆ ನೀಡಿದರು.

ಇಂದು ವಿಧಾನಸಭೆಯ ಕಾರ್ಯಕಲಾಪದಲ್ಲಿ, ಇತ್ತೀಚಿಗೆ ಮೂಡಿಗೆರೆ ಮತಕ್ಷೇತ್ರದ ವ್ಯಾಪ್ತಿಯಲ್ಲಿ ಆನೆಗಳ ಹಾವಳಿ ಹೆಚ್ಚಾಗಿದ್ದು, ರೈತರ ಬೆಳೆಗಳನ್ನು ಹಾಳು ಮಾಡುತ್ತಿರುವ ಕುರಿತು ಸರ್ಕಾರ ಕೈಗೊಂಡ ಕ್ರಮಗಳ ಬಗ್ಗೆ ವಿಧಾನಸಭೆಯ ಸದಸ್ಯರಾದ ಕುಮಾರಸ್ವಾಮಿ ಎಂ.ಪಿ ಕೇಳಿದ ಪ್ರಶ್ನೆಗೆ ಅರಣ್ಯ ಪರಿಸರ ಮತ್ತು ಜೀವಿಶಾಸ್ತ್ರ ಸಚಿವ ಆನಂದ್ ಸಿಂಗ್ ಪರವಾಗಿ ನಗರಾಭಿವೃದ್ಧಿ ಸಚಿವ ಭೈರತಿ ಬಸವರಾಜ್ ಉತ್ತರಿಸುತ್ತಿದ್ದ ಸಂದರ್ಭದಲ್ಲಿ ಮಧ್ಯಪ್ರವೇಶಿಸಿ ಸಭಾಧ್ಯಕ್ಷರು ಸಲಹೆ ನೀಡಿದರು.

ಮೂಡಿಗೆರೆ ಮತಕ್ಷೇತ್ರದ ವ್ಯಾಪ್ತಿಗೆ ಮೂಡಿಗೆರೆ, ಆಲ್ದೂರು ಮತ್ತು ಮುತ್ತೋಡಿ ವಲಯಗಳು ಸೇರಿದ್ದು, ಕಾಡಾನೆಗಳು ಜನವಸತಿ ಪ್ರದೇಶಕ್ಕೆ ಬಾರದಿರುವಂತೆ ಆನೆ ನಿರೋಧಕ ಕಂದಕ, ಸೋಲಾರ್ ತಂತಿ ಬೇಲಿ, ಟೆಂಟಿಕಲ್ ಫೆನ್ಸಿಂಗ್, ಆರ್.ಸಿ.ಸಿ. ಪಿಲ್ಲರ್‌ಗಳು ಮುಂತಾದುವುಗಳನ್ನು ನಿರ್ಮಿಸಲಾಗಿದೆ ಎಂದು ನಗರಾಭಿವೃದ್ಧಿ ಸಚಿವ ಭೈರತಿ ಬಸವರಾಜ್ ತಿಳಿಸಿದರು.

2016-17 ಇಂದೀಚೆಗೆ ಮೂಡಿಗೆರೆ ಮತಕ್ಷೇತ್ರದ ವ್ಯಾಪ್ತಿಯಲ್ಲಿ ಒಟ್ಟು 21.00 ಕಿ.ಮೀ. ಆನೆ ನಿರೋಧಕ ಕಂದಕವನ್ನು ನಿರ್ಮಿಸಲಾಗಿದೆ. ಇದಲ್ಲದೆ ಈ ಭಾಗದಲ್ಲಿ 8 ಕಿ.ಮೀ.ಗಳಷ್ಟು ಸೋಲಾರ್ ತಂತಿ ಬೇಲಿ ನಿರ್ಮಾಣ, 10.00 ಕಿ.ಮೀ. ಟಂಟಿಕಲ್ ಫೆನ್ಸಿಂಗ್ ಹಾಗೂ ಆನೆ ನಿರೋಧಕ ಕಂದಕ ನಿರ್ಮಿಸಲು ಸಾಧ್ಯವಾಗದ ಪ್ರದೇಶದಲ್ಲಿ 63 ಆರ್.ಸಿ.ಸಿ. ಪಿಲ್ಲರ್‌ಗಳನ್ನು ನಿರ್ಮಿಸಲಾಗಿದೆ ಎಂದು ಸಚಿವರು ತಿಳಿಸಿದರು.

ಮೂಡಿಗೆರೆ ಮತಕ್ಷೇತ್ರದ ವ್ಯಾಪ್ತಿಯಲ್ಲಿ ಆನೆಗಳು ಜನವಸತಿ ಪ್ರದೇಶಕ್ಕೆ ಬರದಂತೆ ಹಾಗೂ ಜನವಸತಿ ಪ್ರದೇಶಕ್ಕೆ ಬಂದಾಗ, ಇವುಗಳನ್ನು ಕಾಡಿಗೆ ಹಿಮ್ಮೆಟ್ಟಿಸಲು ಪ್ರಸಕ್ತ ಸಾಲಿನಲ್ಲಿ ಒಟ್ಟು 10 ಆನೆ ಹಿಮ್ಮೆಟಿಸುವ ತಂಡಗಳನ್ನು ರಚಿಸಿ ಕಾರ್ಯ ನಿರ್ವಹಿಸಲಾಗುತ್ತಿದೆ ಎಂದು ತಿಳಿಸಿದರು.

## ಚಿತ್ರಸಂತೆ

ಬೆಂಗಳೂರು, ಡಿಸೆಂಬರ್ 10 (ಕರ್ನಾಟಕ ವಾರ್ತೆ) :

ಕರ್ನಾಟಕ ಚಿತ್ರಕಲಾ ಪರಿಷತ್ತು ಕಲೆ ಮತ್ತು ಸಂಸ್ಕೃತಿಯ ಸೇವೆಯಲ್ಲಿ 60 ವಸಂತಗಳು ತುಂಬಿದ ಸಂದರ್ಭಗಳಲ್ಲಿ ವಜ್ರಮಹೋತ್ಸವ ಅಂಗವಾಗಿ ಹಲವಾರು ಕಲಾ ಕಾರ್ಯಕ್ರಮಗಳನ್ನು ಆಯೋಜಿಸಲಾಗುತ್ತಿದೆ. ಪ್ರಸ್ತುತ ವರ್ಷದಲ್ಲಿ ಸಾಂಕ್ರಾಮಿಕ ಪಿಡುಗು–ಕೋವಿಡ್–19ರಿಂದಾಗಿ ಚಿತ್ರಸಂತೆಯಲ್ಲಿ ಅತ್ಯಧಿಕ ಕಲಾವಿದರು ಮತ್ತು ಕಲಾಸಕ್ತರು ಒಂದೆಡೆ ಸೇರಲು ಸಾಧ್ಯವಾಗುವುದಿಲ್ಲ. ಕಲಾವಿದರ ಮತ್ತು ಕಲಾಸಕ್ತರ ಸಾರ್ವಜನಿಕರ ಸುರಕ್ಷತೆಯ ಹಿತದೃಷ್ಟಿಯಿಂದ ದಿನಾಂಕ 03–01–2021 ರಂದು 18ನೇ ಚಿತ್ರಸಂತೆ ಕಾರ್ಯಕ್ರಮವನ್ನು ಆನ್‌ಲೈನ್‌ನಲ್ಲಿ ಉದ್ಘಾಟನೆಗೊಂಡು ಒಂದು ತಿಂಗಳ ಕಾಲ ಆಯೋಜಿಸಲಿರುವ ಚಿತ್ರಸಂತೆಯನ್ನು "ಕರೋನಾ ಯೋಧ"ರಿಗೆ ಸಮರ್ಪಿಸಲಾಗಿದೆ. ಕರ್ನಾಟಕ ಚಿತ್ರಕಲಾ ಪರಿಷತ್ತಿನ ಎಲ್ಲಾ ಪ್ರದರ್ಶನ ಕಲಾ ಗ್ಯಾಲರಿಯಲ್ಲಿ ಆಹ್ವಾನಿತ ಹಿರಿಯ ಕಲಾವಿದರ ಕಲಾಕೃತಿಗಳ ಪ್ರದರ್ಶನವನ್ನು ಏರ್ಪಡಿಸಿದೆ.

ಪ್ರತಿ ವರ್ಷದಂತೆ ಈ ಬಾರಿಯು ಚಿತ್ರಸಂತೆಯ ಪ್ರಯುಕ್ತ ರಾಷ್ಟ್ರಮಟ್ಟದ ಹೆಸರಾಂತ ಹಿರಿಯ ನಾಲ್ಕು ಕಲಾವಿದರಿಗೆ "ಚಿತ್ರಕಲಾ ಸನ್ಮಾನ್" ಪ್ರಶಸ್ತಿ ನೀಡಿ ಗೌರವಿಸಲಾಗುವುದು.

ಕರ್ನಾಟಕ ಚಿತ್ರಕಲಾ ಪರಿಷತ್ತು ರಾಜ್ಯ, ರಾಷ್ಟ್ರೀಯ ಮತ್ತು ಆಂತರರಾಷ್ಟ್ರೀಯ ಕಲಾವಿದರ ಅನುಕೂಲಕ್ಕಾಗಿ 18 ನೇ ಚಿತ್ರಸಂತೆಯನ್ನು ಆನ್‌ಲೈನ್‌ನಲ್ಲಿ ಆಯೋಜಿಸುತ್ತಿದ್ದು, ಇದು ಅಂತರ ರಾಷ್ಟ್ರೀಯ ವ್ಯಾಪ್ತಿ ಕಾರ್ಯಕ್ರಮವಾಗಲಿದೆ. ಆದ್ದರಿಂದ ಆಸಕ್ತ ಕಲಾವಿದರು ಈಗಾಗಲೇ ತಮ್ಮ ಅರ್ಜಿಗಳನ್ನು ಆನ್‌ಲೈನ್‌ನಲ್ಲಿ ನೋಂದಾಯಿಸಿಕೊಂಡಿರುತ್ತಾರೆ. ಈ ಕಾರ್ಯಕ್ರಮವನ್ನು ದಿನಾಂಕ 03–01–2021 ರ ಭಾನುವಾರ ಬೆಳಿಗ್ಗೆ 10–30 ಗಂಟೆಗೆ ಮುಖ್ಯಮಂತ್ರಿಯವರು ಹಾಗೂ ನಾಡಿನ ಗಣ್ಯವ್ಯಕ್ತಿಗಳು ಉದ್ಘಾಟಿಸಲಿದ್ದಾರೆಂದು ಅಧಿಕೃತ ಪ್ರಕಟಣೆ ತಿಳಿಸಿದೆ.

**Dinesh Chandra Patwari, IRS, has taken charge as Principal Chief Commissioner of Income Tax, Karnataka and Goa Region**

**Bengaluru, December 10 (Karnataka Information)**

**Dinesh Chandra Patwari, IRS, has taken charge as Principal Chief Commissioner of Income Tax, Karnataka and Goa Region, Bengaluru says official press release.**

## ಅಧಿಕಾರ ಸ್ವೀಕಾರ

ಬೆಂಗಳೂರು, ಡಿಸೆಂಬರ್ 10 (ಕರ್ನಾಟಕ ವಾರ್ತೆ) :

ದಿನೇಶ್‌ಚಂದ್ರ ಪಟವಾರಿ, ಅವರು ಕರ್ನಾಟಕ ಮತ್ತು ಗೋವಾ ವಲಯ ಆದಾಯ ತೆರಿಗೆ ಇಲಾಖೆಯ ಪ್ರಧಾನ ಮುಖ್ಯ ಆಯುಕ್ತರಾಗಿ ಅಧಿಕಾರ ವಹಿಸಿಕೊಂಡಿರುತ್ತಾರೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## ವಿದ್ಯಾರ್ಥಿ ಬಸ್‌ಪಾಸ್ ಅವಧಿ ವಿಸ್ತರಣೆ

ಬೆಂಗಳೂರು, ಡಿಸೆಂಬರ್ 10 (ಕರ್ನಾಟಕ ವಾರ್ತೆ) :

ರಾಜ್ಯದ ವಿಶ್ವವಿದ್ಯಾಲಯಗಳು / ಖಾಸಗಿ ವಿಶ್ವವಿದ್ಯಾಲಯ / ಪದವಿ / ಸ್ನಾತಕೋತ್ತರ / ಡಿಪ್ಲೋಮಾ / ತಾಂತ್ರಿಕ / ವೈದ್ಯಕೀಯ ಕಾಲೇಜು / ಅನುದಾನ / ಅನುದಾನ ರಹಿತ ಕಾಲೇಜುಗಳಲ್ಲಿ 2020–21ನೇ ಶೈಕ್ಷಣಿಕ ಚಟುವಟಿಕೆಗಳನ್ನು ದಿನಾಂಕ: 17.11.2020 ರಿಂದ ಪ್ರಾರಂಭಿಸಲು ಸರ್ಕಾರದ ಆದೇಶದಲ್ಲಿ ಸೂಚಿಸಿದ್ದರಿಂದ, ನಿಗಮದ ಬಸ್ಸುಗಳಲ್ಲಿ ವಿದ್ಯಾರ್ಥಿ ಬಸ್ ಪಾಸುದಾರರಿಗೆ 2019–20ನೇ ಸಾಲಿನ ಪಾಸಿನ ಆಧಾರದಲ್ಲಿ ಉಚಿತವಾಗಿ ಪ್ರಯಾಣಿಸಲು ದಿನಾಂಕ: 10.12.2020 ರವರೆಗೆ ಅವಕಾಶ ಕಲ್ಪಿಸಲಾಗಿತ್ತು.

ಮುಂದುವರೆದು, ಕ.ರಾ.ರ.ಸಾ ನಿಗಮವು 2019–20ನೇ ಸಾಲಿನಲ್ಲಿ ವಿತರಣೆಯಾಗಿರುವ ಪದವಿ / ಸ್ನಾತಕೋತ್ತರ / ಡಿಪ್ಲೋಮಾ / ತಾಂತ್ರಿಕ / ವೈದ್ಯಕೀಯ ಕಾಲೇಜು ವಿದ್ಯಾರ್ಥಿಗಳ ಬಸ್ ಪಾಸುಗಳನ್ನು **"31ನೇ ಡಿಸೆಂಬರ್ 2020 ರವರೆಗೆ"** ನಿಗಮದ ಬಸ್ಸುಗಳಲ್ಲಿ ಮಾನ್ಯ ಮಾಡಲು ಕ್ರಮಕೈಗೊಳ್ಳಲಾಗಿದೆ.

ಅದರನ್ವಯ ಮೇಲ್ಕಂಡ ವರ್ಗದ ವಿದ್ಯಾರ್ಥಿಗಳು ಪ್ರಸಕ್ತ ವರ್ಷದಲ್ಲಿ ಕಾಲೇಜುಗಳಿಗೆ ದಾಖಲಾಗಿರುವ ಶುಲ್ಕ ಪಾವತಿ ರಶೀದಿಯೊಂದಿಗೆ, 2019–20ನೇ ಸಾಲಿನ ವಿದ್ಯಾರ್ಥಿ ಬಸ್ ಪಾಸ್ ತೋರಿಸಿ ಸಂಬಂಧಪಟ್ಟ ಮಾರ್ಗದಲ್ಲಿ ಕರಾರಸಾ ನಿಗಮದ ನಗರ, ಹೊರವಲಯ, ಸಾಮಾನ್ಯ ಹಾಗೂ ವೇಗದೂತ ಬಸ್ಸುಗಳಲ್ಲಿ ಪ್ರಯಾಣಿಸಲು ಅವಕಾಶ ಕಲ್ಪಿಸಿದೆ. ವಿದ್ಯಾರ್ಥಿಗಳು ಸದರಿ ಅವಕಾಶವನ್ನು ಸದುಪಯೋಗಪಡಿಸಿಕೊಳ್ಳುವುದು.

**Karnataka State Pollution Control Board**
**ParisaraBhavan, BENGALURU**
**AQI of the CAAQM stations established in Bengaluru City**
**Date :10.12.2020**

| Sl. No. | Station | AQI | Category | Prominent Pollutant |
|---|---|---|---|---|
| 1 | Veterinary College Hebbal | 73 | Satisfactory | $PM_{10}$ |
| 2 | Jayanagar 5th Block, Shalini ground | 67 | Satisfactory | $PM_{10}$ |
| 3 | KAVIKA, Mysore Road | 75 | Satisfactory | $PM_{10}$ |
| 4 | Rajeev Gandhi Institute of Chest Disease, NIMHANS, Hombegowda Nagar | 53 | Satisfactory | $PM_{10}$ |
| 5 | HSR Layout, near Central Silkboard | 39 | Good | $PM_{2.5}$ |

| | | | | |
|---|---|---|---|---|
| 6 | City Railway Station, Magestic, Bengaluru | 51 | Satisfactory | $NO_2$ |
| 7 | Saneguruvanahalli, NisargaBhavan, KSPCB, Shivanagara | 31 | Good | CO |
| 8 | BWSSB, Kadabesanahalli | 33 | Good | $PM_{2.5}$ |
| 9 | Peenya | 73 | Satisfactory | $O_3$ |
| 10 | BTM Layout | 49 | Good | $PM_{2.5}$ |

| Category (Range) | Possible Health Impacts | Category (Range) | Possible Health Impacts |
|---|---|---|---|
| Good (0–50) | Minimal Impact | Poor (201–300) | Breathing discomfort to people on prolonged exposure |
| Satisfactory (51–100) | Minor breathing discomfort to sensitive people | Very Poor (301–400) | Respiratory illness to the people on prolonged exposure |
| Moderate (101–200) | Breathing discomfort to the people with lung, Heart disease, children and older | Severe (>401) | Respiratory effects even on healthy people |

**ಕರ್ನಾಟಕರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ**

**ಪರಿಸರ ಭವನ, ಬೆಂಗಳೂರು.**

**ಬೆಂಗಳೂರು ನಗರದಲ್ಲಿ ಸ್ಥಾಪಿಸಿರುವ ನಿರಂತರ ಪರಿವೇಷ್ಠಕ ವಾಯುಗುಣಮಟ್ಟ ಮಾಪನ ಕೇಂದ್ರಗಳ ವಾಯುಗುಣಮಟ್ಟ ಸೂಚ್ಯಂಕ (AQI), ಬೆಂಗಳೂರು**

**ದಿನಾಂಕ: 10.12.2020**

| ಕ್ರಮ ಸಂಖ್ಯೆ | ಮಾಪನ ಕೇಂದ್ರಗಳ ಹೆಸರು | ವಾಯುಗುಣಮಟ್ಟ ಸೂಚ್ಯಂಕ (AQI) | ವರ್ಗ | ಪ್ರಮುಖ ಮಾಲಿನ್ಯಕಾರಕ |
|---|---|---|---|---|
| 1 | ಪಶುವೈದ್ಯಕೀಯಕಾಲೇಜು, ಹೆಬ್ಬಾಳ | 73 | ತೃಪ್ತಿಕರ | $PM_{10}$ |
| 2 | ಜಯನಗರ 5ನೇ ಬ್ಲಾಕ್, ಶಾಲಿನಿ ಮೈದಾನ | 67 | ತೃಪ್ತಿಕರ | $PM_{10}$ |
| 3 | ಕವಿಕ, ಮೈಸೂರುರಸ್ತೆ | 75 | ತೃಪ್ತಿಕರ | $PM_{10}$ |
| 4 | ರಾಜೀವ್‌ಗಾಂಧಿಎದೆರೋಗಗಳ ಸಂಸ್ಥೆ, ನಿಮ್ಹಾನ್ಸ್ ಹೊಂಬೆಗೌಡನಗರ | 53 | ತೃಪ್ತಿಕರ | $PM_{10}$ |
| 5 | ಹೆಚ್.ಎಸ್.ಆರ್ ಲೇಔಟ್, [illegible] | 39 | ಉತ್ತಮ | $PM_{2.5}$ |
| 6 | ನಗರರೈಲ್ವೆ ನಿಲ್ದಾಣ, ಮೆಜೆಸ್ಟಿಕ್, ಬೆಂಗಳೂರು | 51 | ತೃಪ್ತಿಕರ | $NO_2$ |
| 7 | ಸಾಣೆಗುರುವನಹಳ್ಳಿ, ನಿಸರ್ಗ ಭವನ, ಕರ್ನಾಟಕರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ, | 31 | ಉತ್ತಮ | CO |
| 8 | BWSSB, ಕಾಡಬೀಸನಹಳ್ಳಿ | 33 | ಉತ್ತಮ | $PM_{2.5}$ |
| 9 | ಪೀಣ್ಯ | 73 | ತೃಪ್ತಿಕರ | $O_3$ |
| 10 | ಬಿಟಿಎಂ ಲೇಔಟ್ | 49 | ಉತ್ತಮ | $PM_{2.5}$ |

| ವರ್ಗ(ಶ್ರೇಣಿ) | ಉಂಟಾಗಬಹುದಾದಆರೋಗ್ಯ ಪರಿಣಾಮಗಳು |
|---|---|
| **ಉತ್ತಮ (0–50)** | ಕನಿಷ್ಠ ಪರಿಣಾಮ |
| **ತೃಪ್ತಿಕರ (51–100)** | ಸೂಕ್ಷ್ಮಜನರಿಗೆ ಸಣ್ಣ ಉಸಿರಾಟದ ಅಸ್ವಸ್ಥತೆ |
| **ಸಾಧಾರಣ (101–200)** | ಶ್ವಾಸಕೋಶ, ಹೃದಯಕಾಯಿಲೆಯವರು, ಮಕ್ಕಳು ಮತ್ತು ಹಿರಿಯ ವಯಸ್ಕರಿಗೆ ಉಸಿರಾಟದ ಅಸ್ವಸ್ಥತೆ |
| **ಕಳಪೆ (201–300)** | ದೀರ್ಘಕಾಲಿಕಒಡ್ಡುವಿಕೆಯಿಂದಜನರಿಗೆ ಉಸಿರಾಟದ ಅಸ್ವಸ್ಥತೆ |
| **ಅತಿ ಕಳಪೆ (301–400)** | ದೀರ್ಘಕಾಲಿಕಒಡ್ಡುವಿಕೆಯಿಂದಜನರಿಗೆ ಶ್ವಾಸಕೋಶದಅಸ್ವಸ್ಥತೆ |
| **ತೀವ್ರ (>401)** | ಆರೋಗ್ಯವಂತಜನರಿಗೂ ಉಸಿರಾಟದ ಅಸ್ವಸ್ಥತೆ |

**“Sabarimala Swamy Prasadam”**

Bengaluru, December 10 (Karnataka Information)

The Department of Posts has launched a “Home delivery scheme’ to provide “Sabarimala Swamy Prasadam” to devotees. This is a great opportunity for the devotees who are not in a position to visit Sabarimala due to COVID-19 Pandemic situation for getting blessings from Lort Ayyappa through “Swamy Prasadam”. The service was launched by Sri Rajarajan, Chief Postmaster General, Kerala Circle, Trivandrum-695033. Under the scheme, a prasadam packet containing aravana, ghee, sandalwood paste, vibhooti, kumkumam and turmeric will be delivered to devotees to their homes through Speed Post service.

The Sabarimala Temple opens for darshan during Mandalam season from Mid November to Mid February. Due to Covid 19 Pandemic, entry of devotees to the temple has been restricted and only limited number of devotees can visit the shrine. Hence Kerala Postal Circle has tied up with Travancore Devaswom for providing door delivery of “Swamy Prasadam’ via Speed Post.

A devotee seeking Prasadam can visit any nearest Post Office in Karnataka or any State in India and remit Rs. 450/- per packet at the Post Office counter. Public residing anywhere in India ca avail this service for delivery anywhere in India says press release issued by Chief Postmaster General, Karnataka Circle, Bengaluru-1.